ಸಂಖ್ಯೆ: ಎಲ್‌ಎನ್‌ಡಿ.ಸಿ.ಆರ್:2/10-11

ತಹಶೀಲ್ದಾರ್ ರವರ ಕಾರ್ಯಾಲಯ
ಕೃಷ್ಣರಾಜಪೇಟೆ ತಾಲ್ಲೂಕು
ದಿನಾಂಕ: 1/10/2010

# ಅಧಿಕೃತ ಜ್ಞಾಪನ

ವಿಷಯ:- ಸರ್ಕಾರಿ ಭೂಮಿಯನ್ನು ರಕ್ಷಿಸಲು ತಾಲ್ಲೂಕು ಮಟ್ಟದ ಪ್ರಾಧಿಕಾರಗಳನ್ನು ರಚಿಸುವ ಬಗ್ಗೆ.

ಉಲ್ಲೇಖ:- 1) ಸರ್ಕಾರದ ಆದೇಶ ಸಂಖ್ಯೆ:ಕಂಇ:92 ಎಲ್.ಜಿ.ಕ್ಯೂ 99 (ಪಿ1)ದಿನಾಂಕ 13-11-2008

2) ಮಂಡ್ಯ ಜಿಲ್ಲಾಧಿಕಾರಿಗಳ ಪತ್ರದ ಸಂಖ್ಯೆ:ಎಂಎಸ್ ಸಿ(1)464/2008-09 ದಿನಾಂಕ 17-12-2008

---

ಮೇಲ್ಕಂಡ ವಿಷಯಕ್ಕೆ ಸಂಭಂಧಿಸಿದಂತೆ ಸರ್ಕಾರಿ ಕಂದಾಯ ಭೂಮಿಗಳನ್ನು ಸಂರಕ್ಷಿಸಲು ಕೃಷ್ಣರಾಜಪೇಟೆ ತಾಲ್ಲೂಕು ಮಟ್ಟದ ಪ್ರಾಧಿಕಾರವನ್ನು ಈ ಕೆಳಕಂಡಂತೆ ರಚಿಸಿ ಆದೇಶ ಹೊರಡಿಸಲಾಗಿದೆ.

| | |
|---|---|
| 1) ತಹಶೀಲ್ದಾರ್ ರವರು. | ಅಧ್ಯಕ್ಷರು |
| 2) ಕಾರ್ಯನಿರ್ವಾಹಣಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ | ಸದಸ್ಯರು |
| 3) ತಾಲ್ಲೂಕು ಆರೋಗ್ಯಾಧಿಕಾರಿಗಳು, | ಸದಸ್ಯರು |
| 4) ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 5) ತಾಲ್ಲೂಕು ಹಿಂದುಳಿದ ವರ್ಗಗಳ ಅಭಿವೃದ್ಧಿ ಅಧಿಕಾರಿಗಳು | ಸದಸ್ಯರು |
| 6) ಎಕ್ಸಿಕ್ಯೂಟಿವ್ ಇಂಜಿನಿಯರ್, ಹೆಚ್.ಎಲ್.ಬಿ.ಸಿ.ವಿಭಾಗ, | ಸದಸ್ಯರು |
| 7) ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, | ಸದಸ್ಯರು |
| 8) ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಿಡಬ್ಲ್ಯೂಡಿ ಉಪವಿಭಾಗ, | ಸದಸ್ಯರು |
| 9) ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ | ಸದಸ್ಯರು |
| 10) ಅರಣ್ಯಾಧಿಕಾರಿಗಳು,ಸಾಮಾಜಿಕ ಅರಣ್ಯ ಇಲಾಖೆ, | ಸದಸ್ಯರು |
| 11) ಅರಣ್ಯಾಧಿಕಾರಿಗಳು, ವಲಯ ಅರಣ್ಯ ಇಲಾಖೆ, | ಸದಸ್ಯರು |
| 12) ಆರಕ್ಷಕ ವೃತ್ತ ನಿರೀಕ್ಷಕರು, | ಸದಸ್ಯರು |

ಮೇಲ್ಕಂಡ ಪ್ರಾಧಿಕಾರವು ಈ ಕೆಳಕಂಡ ಅಂಶಗಳ ಬಗ್ಗೆ ಕಾರ್ಯನಿರ್ವಹಿಸತಕ್ಕದ್ದು.

1) ಸರ್ಕಾರಿ ಭೂಮಿಯ ಒತ್ತುವರಿಯನ್ನು ಪತ್ತೆ ಹಚ್ಚುವುದು.
2) ಸರ್ಕಾರಿ ಭೂಮಿಯನ್ನು ಒತ್ತುವರಿದಾರರಿಂದ ತೆರವುಗೊಳಿಸಿ ತ್ರೈಮಾಸಿಕ ವರದಿಯನ್ನು ಸಲ್ಲಿಸುವುದು
3) ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 192(ಎ)ರಡಿಯಲ್ಲಿ ಅಪರಾಧ ಪ್ರಕರಣಗಳನ್ನು ದಾಖಲು ಮಾಡುವುದು

ಸಹಿ:–
ತಹಶೀಲ್ದಾರ್
ಕೃಷ್ಣರಾಜಪೇಟೆ ತಾಲ್ಲೂಕು

ಪ್ರತಿಯನ್ನು:

!) ಮಾನ್ಯ ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರುರವರಿಗೆ ಅವಗಾಹನೆಗಾಗಿ ಸಲ್ಲಿಸಿದೆ.

2) ಮಾನ್ಯ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯರವರಿಗೆ ಅವಗಾಹನೆಗಾಗಿ ಸಲ್ಲಿಸಿದೆ.

3) ಮಾನ್ಯ ಉಪವಿಭಾಗಾಧಿಕಾರಿಗಳು, ಪಾಂಡವಪುರ ಉಪವಿಭಾಗ, ಪಾಂಡವಪುರ ರವರಿಗೆ ಅವಗಾಹನೆಗಾಗಿ ಸಲ್ಲಿಸಿದೆ,

4) ಎಲ್ಲಾ ಸಮಿತಿ ಸದಸ್ಯರಿಗೆ ಮಾಹಿತಿಗಾಗಿ ಹಾಗೂ ಅಗತ್ಯಕ್ರಮಕ್ಕಾಗಿ ನೀಡಿದೆ.

ತಹಶೀಲ್ದಾರ್,
ಕೃಷ್ಣರಾಜಪೇಟೆ ತಾಲ್ಲೂಕು